ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.

<u>ಸಿ.ಸಿ.1085/2025</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ದೇವರಾಜ್ | ಪಿ.ಡಬ್ಲ್ಯೂ.1 |
| ತಂದೆಯ ಹೆಸರು | : | ದೇವೇಗೌಡ | ಸಿ.ಡಬ್ಲ್ಯೂ.2 |
| ವಯಸ್ಸು | : | 53 ವರ್ಷ | |
| ವೃತ್ತಿ | : | ವ್ಯವಸಾಯ | |
| ವಾಸ | : | ಬಾಳೆಹಳ್ಳಿ | |

<u>ದಿನಾಂಕಃ 11-11-2025 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-</u>

ಆರೋಪಿ ಗೊತ್ತು. ನೋಟೀಸ್ ಮತ್ತು ಮಹಜರ್ ಅನ್ನು ನೋಡುತ್ತಿದ್ದು ಅದನ್ನು ನಿಪಿ-1 ಮತ್ತು ನಿಪಿ-2 ಎಂದು ಗುರುತಿಸಲಾಗಿ ನನ್ನ ಸಹಿ ನಿಪಿ-1(ಎ) ಮತ್ತು ನಿಪಿ-2(ಎ) ಇರುತ್ತದೆ. ಯಾವ ವಿಚಾರಕ್ಕಾಗಿ ಸದರಿ ಸಹಿಯನ್ನು ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಸದರಿ ಸಹಿಯನ್ನು ಕಬ್ಬಿಣಸೇತುವೆ ಹತ್ತಿರ ಹಾಕಿರುತ್ತೇನೆ. ನನ್ನ ಜೊತೆಗೆ ಅಶೋಕ ಸಹಿಯನ್ನು ಹಾಕಿರುತ್ತಾರೆ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಸದರಿ ಸಹಿಯನ್ನು ನಾನು ರಾತ್ರಿಃ08.00 ಗಂಟೆಗೆ ಹಾಕಿರುತ್ತೇನೆ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಎಪಿಪಿರವರು ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಯನ್ನು ನೀಡಲಾಯಿತು)

<u>ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ-</u>

ದಿಃ28.03.2025 ರಂದು ರಾತ್ರಿಃ07.40 ರಿಂದ 08.40 ರವರೆಗೆ ಪೊಲೀಸರು ಘಟನಾ ಸ್ಥಳದಲ್ಲಿ ನಿಪಿ-2 ರಂತೆ ಮಹಜರ್ ಅನ್ನು ತಯಾರಿಸಿದಾಗ ನಾನು ಸ್ಥಳದಲ್ಲಿ ಹಾಜರಿದ್ದು ಮಹಜರ್ ನ ವಿಷಯಗಳನ್ನು ತಿಳಿದುಕೊಂಡು ನಿಪಿ-2(ಎ) ರಂತೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಈಗ ನನಗೆ ತೋರಿಸುತ್ತಿರುವ ಭಾವಚಿತ್ರವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ02.04.2025 ರಂದು ನಾನು ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ ' ದಿಃ28.03.2025 ರಂದು ---- ಪುನಃ ನೋಡಿದರೆ ಗುರುತಿಸುತ್ತೇನೆ' ಎಂದು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿಪಿ-3 ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ಗೊತ್ತಿದ್ದರೂ ಕೂಡಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-</u>

(ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ).

<u>ಮರು ವಿಚಾರಣೆಃ ಇಲ್ಲಾ.</u>

C.C.No.1085/2025
PW-1 CW-2

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

ಎಸ್ಆರ್ಃ